Des. No. 2783/2020
25-11-2020.



# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ ಕಛೇರಿ, ಕೊಡಗು-ಮಡಿಕೇರಿ.

## ಅಧಿಸೂಚನೆ

## ದಿನಾಂಕ : 25 ನೇ ನವೆಂಬರ್ 2020

**ವಿಷಯ:**-ನವಕಾನೂನು ಪದವೀಧರರಿಗೆ 2020-21 ನೇ ಸಾಲಿನ ಪ್ರೋತ್ಸಾಹಧನ ನೀಡುವ ಯೋಜನೆಯ ಫಲಾನುಭವಿಗಳನ್ನು ಜಿಲ್ಲಾ ಮಟ್ಟದ ಸಮಿತಿಯಲ್ಲಿ ಆಯ್ಕೆ ಮಾಡಲು ಅರ್ಜಿಗಳನ್ನು ಆಹ್ವಾನಿಸುವ ಬಗ್ಗೆ

**ಉಲ್ಲೇಖ:**-1.ಕರ್ನಾಟಕ ಸರ್ಕಾರದ ನಡವಳಿಯ ಸರ್ಕಾರದ ಆದೇಶ ಸಂ: ಲಾ ಎಲ್‌ಎಡಿ/204/2020, ಬೆಂಗಳೂರು, ದಿ: 19.11.2020.

2. ಈ ಕಛೇರಿ ಟಿಪ್ಪಣಿಯ ಮೇಲಿನ ಆದೇಶ ದಿ: 25.11.2020.

* * * * *

ಉಲ್ಲೇಖ-1 ರಂತೆ ನವಕಾನೂನು ಪದವೀಧರರಿಗೆ ಪ್ರೋತ್ಸಾಹಧನ ನೀಡುವ ಯೋಜನೆಗೆ 2020-21 ನೇ ಸಾಲಿನಲ್ಲಿ ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಿ ಅರ್ಹ ಫಲಾನುಭವಿಗಳಿಗೆ ಸರ್ಕಾರದ ಸೌಲಭ್ಯಗಳನ್ನು ತ್ವರಿತವಾಗಿ ತಲುಪಿಸುವ ಉದ್ದೇಶದಿಂದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಅಧ್ಯಕ್ಷತೆಯಲ್ಲಿ ಆಯ್ಕೆ ಸಮಿತಿಯನ್ನು ರಚಿಸಲಾಗಿದೆ.

ಆದ್ದರಿಂದ ಅರ್ಹವಿರುವ ನವಕಾನೂನು ಪದವೀಧರರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಹರಿರುವ ನವಕಾನೂನು ಪದವೀಧರರು (ಫಲಾನುಭವಿಗಳು) ಈ ಅಧಿಸೂಚನೆಯಲ್ಲಿ ತಿಳಿಸಿರುವ ಷರತ್ತು ಹಾಗೂ ಸೂಚನೆಗಳನ್ವಯ ನಿಗದಿತ ನಮೂನೆಯಲ್ಲಿ ಅರ್ಜಿಯನ್ನು ಭರ್ತಿ ಮಾಡಿ ಕೆಳಗೆ ತಿಳಿಸಿದ ಸಂಬಂಧಪಟ್ಟ ಹಿರಿಯ ನ್ಯಾಯಾಧೀಶರುಗಳ ಮುಖಾಂತರ ದಾಖಲೆ ಪ್ರತಿಗಳೊಂದಿಗೆ ಸ್ವಯಂ ದೃಢೀಕರಿಸಿ ಸಲ್ಲಿಸತಕ್ಕದ್ದು.

ಅರ್ಜಿಯನ್ನು ಸಲ್ಲಿಸಲು ಪ್ರಾರಂಭದ ದಿನಾಂಕ : 03.12.2020 ಹಾಗೂ ಕಡೆಯ ದಿನಾಂಕ: 02.01.2021 ಸಂಜೆ 5.00 ಗಂಟೆ.

**ಅರ್ಜಿ ಸಲ್ಲಿಸಬೇಕಾದ ವಿಳಾಸ** :

1. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,
   ಕೊಡಗು-ಮಡಿಕೇರಿ.
2. 2 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,
   ಕೊಡಗು-ಮಡಿಕೇರಿ. (ಕಾರ್ಯ ನಿರ್ವಹಣೆ-ವಿರಾಜಪೇಟೆ)
3. ಹಿರಿಯ ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯ,
   ಸೋಮವಾರಪೇಟೆ .

**ಷರತ್ತುಗಳು :-**

1. ಈ ಯೋಜನೆಯು 2020-21 ನೇ ಸಾಲಿನಲ್ಲಿ ಅನುಷ್ಠಾನಗೊಳ್ಳುತ್ತಿದ್ದು, ಈ ಯೋಜನೆಯಡಿ ಅರ್ಜಿ ಸಲ್ಲಿಸುವ ಅರ್ಹ ಅಭ್ಯರ್ಥಿಗಳು ಕರ್ನಾಟಕ ರಾಜ್ಯ ವಕೀಲರ ಪರಿಷತ್ತಿನಡಿಯಲ್ಲಿ ದಿ: 01.06.2019 ರಿಂದ 31.05.2020 ರವರೆಗಿನ ಅವಧಿಯಲ್ಲಿ ವಕೀಲ ವೃತ್ತಿಗೆ ನೊಂದಾಯಿಸಿದವರಿಗೆ ಮಾತ್ರ ಅನ್ವಯವಾಗುವುದು.

2. ಈ ಯೋಜನೆಯಡಿಯಲ್ಲಿ ಪ್ರೋತ್ಸಾಹಧನದ ಮೊತ್ತ ಪ್ರತಿ ಮಾಹೆಗೆ ರೂ.2000/- (ರರಡು ಸಾವಿರ ರೂಪಾಯಿಗಳು)ಒಟ್ಟು 24 ತಿಂಗಳುಗಳ ಅವಧಿಗೆ ಸೀಮಿತವಾಗಿರುವುದು.

3. ಸರ್ಕಾರಿ, ಅರೆ ಸರ್ಕಾರಿ ಅಥವಾ ಖಾಸಗಿ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸಿ ವಯೋನಿವೃತ್ತಿ ಕಡ್ಡಾಯ ನಿವೃತ್ತಿ ಮತ್ತು ಸ್ವಇಚ್ಚಾ ನಿವೃತ್ತಿ ಹೊಂದಿದ ನಂತರ ವಕೀಲ ವೃತ್ತಿ ನಡೆಸಲು ಇಚ್ಚಿಸುವ ಕಾನೂನು ಪದವೀಧರರು ಮತ್ತು ಅಂತಹ ಯಾವುದೇ ಸೇವೆಯಿಂದ ತೆಗೆದುಹಾಕಲ್ಪಟ್ಟ ಕಾನೂನು ಪದವೀಧರರು ಪ್ರೋತ್ಸಾಹಧನ ಪಡೆಯಲು, ಅರ್ಜಿ ಸಲ್ಲಿಸಲು ಅರ್ಹರಾಗಿರುವುದಿಲ್ಲ.

4. ಈ ಯೋಜನೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಯ/ಕುಟುಂಬದ ವಾರ್ಷಿಕ ವರಮಾನದ ಮಿತಿಯು ರೂ.40,000/- (ನಲವತ್ತು ಸಾವಿರ ರೂಪಾಯಿಗಳು) ನ್ನು ಮೀರತಕ್ಕದ್ದಲ್ಲ.

5. ಇಂತಹದೇ ಸೌಲಭ್ಯವನ್ನು ಈ ಯೋಜನೆ/ಇತರೆ ಯೋಜನೆಯಡಿ ಅಥವಾ ರಾಜ್ಯ ಸರ್ಕಾರದ ಬೇರೆ ಯಾವುದೇ ಇಲಾಖೆಯ ಯೋಜನೆಯಡಿ ಆಯ್ಕೆಗೊಂಡ ಫಲಾನುಭವಿಗಳು ಈ ಯೋಜನೆಯ ಸೌಲಭ್ಯಗಳಿಗೆ ಅರ್ಹರಾಗುವುದಿಲ್ಲ.

6. ಹೊಸದಾಗಿ ವಕೀಲರ ವೃತ್ತಿಯಲ್ಲಿ ತೊಡಗುವ ಕಾನೂನು ಪದವೀಧರರು ರಾಜ್ಯ ಬಾರ್ ಕೌನ್ಸಿಲ್ ನಲ್ಲಿ ನೊಂದಾಯಿಸಿದ ನಂತರ ಸ್ಥಳೀಯ ವಕೀಲರ ಸಂಘದ ಅಧ್ಯಕ್ಷರಿಂದ ಪ್ರಮಾಣ ಪತ್ರ ಪಡೆದು ಸಂಬಂದಪಟ್ಟ ಸಮಿತಿಯ ಸಂಬಂಧಿತ ತಾಲ್ಲೂಕಿನ ಹಿರಿಯ ಸಿವಿಲ್ ನ್ಯಾಯಾಧೀಶರುಗಳ ಮುಖಾಂತರ ಮತ್ತು ಜಿಲ್ಲಾ ಹಂತದಲ್ಲಿ ಅರ್ಹ ಕಾನೂನು ಪದವೀಧರರು ನೇರವಾಗಿ ಸಮಿತಿಯ ಅಧ್ಯಕ್ಷರಿಗೆ ವಿಳಾಸಿಸಿ ಅರ್ಜಿ ಸಲ್ಲಿಸತಕ್ಕದ್ದು.

<u>ಸೂಚನೆಗಳು</u> :-

1. ಈ ಅಧಿಸೂಚನೆಯೊಂದಿಗೆ ಲಗತ್ತಿಸಿರುವ ಅರ್ಜಿ ನಮೂನೆಯಲ್ಲಿ ಭರ್ತಿ ಮಾಡಿ ಸಲ್ಲಿಸತಕ್ಕದ್ದು.

2. ನಿಗದಿಪಡಿಸಿದ ಕೊನೆಯ ದಿನಾಂಕದೊಳಗಾಗಿ ಅರ್ಜಿಯೊಂದಿಗೆ ಸಂಬಂಧಪಟ್ಟ ದಾಖಲೆಗಳನ್ನು ಕಡ್ಡಾಯವಾಗಿ ಲಗತ್ತಿಸಿ ಅರ್ಹ ಅಭ್ಯರ್ಥಿಗಳು ಮೇಲೆ ತಿಳಿಸಿದ ಆಯಾ ತಾಲ್ಲೂಕಿನ ಹಿರಿಯ ನ್ಯಾಯಾಧೀಶರ ಮುಖಾಂತರ ಅರ್ಜಿಯನ್ನು ಸಲ್ಲಿಸತಕ್ಕದ್ದು. ಕೊನೆಯ ದಿನಾಂಕದ ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

3. ಎಸ್.ಎಸ್.ಎಲ್.ಸಿ ಅಂಕಪಟ್ಟಿ, ದ್ವಿತೀಯ ಪಿಯುಸಿ ಅಂಕಪಟ್ಟಿ, ಪದವಿ ಅಂಕಪಟ್ಟಿ, ಕಾನೂನು ಪದವಿಯ ಪ್ರಮಾಣ ಪತ್ರ, ರಾಜ್ಯ ಬಾರ್ ಕೌನ್ಸಿಲಿನ ನೊಂದಣಿ ಪತ್ರ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಮತ್ತು ವಕೀಲ ವೃತ್ತಿಯಲ್ಲಿ ನಿರ್ವಹಿಸುತ್ತಿರುವ ವಕೀಲರ ಸಂಘದ ಅಧ್ಯಕ್ಷರಿಂದ ಪ್ರಮಾಣ ಪತ್ರವನ್ನು ಪಡೆದು ಎಲ್ಲಾ ದಾಖಲೆಗಳ ಪ್ರತಿಯನ್ನು ಸ್ವಯಂ ದೃಢೀಕರಿಸಿ ಸಲ್ಲಿಸತಕ್ಕದ್ದು.

4. ಇತ್ತೀಚಿನ ಭಾವಚಿತ್ರ ಮತ್ತು ಆಧಾರ್ ಕಾರ್ಡ್/ಚುನಾವಣಾ ಗುರುತಿನ ಚೀಟಿಯ ಜೆರಾಕ್ಸ್ ಪ್ರತಿಯನ್ನು ಸಲ್ಲಿಸತಕ್ಕದ್ದು.

5. ಅರ್ಹ ಅಭ್ಯರ್ಥಿಗಳಿಗೆ ಪ್ರೋತ್ಸಾಹಧನ ನೀಡುವ ಸಂಬಂಧ/ಆಯ್ಕೆಯ ಸಂಬಂಧ ಯಾವುದೇ ತೀರ್ಮಾನಗಳು ಜಿಲ್ಲಾ ಹಂತದ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ.

ತಮ್ಮ ವಿಶ್ವಾಸಿ,

Sd/xxx

**(ಮಲ್ಲಿಕಾರ್ಜುನಗೌಡ)**
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಕೊಡಗು-ಮಡಿಕೇರಿ.

<u>ಪ್ರತಿಯನ್ನು :-</u>

ಕರ್ನಾಟಕ ಸರ್ಕಾರದ ಅಧೀನ ಕಾರ್ಯದರ್ಶಿ, ಕಾನೂನು ಇಲಾಖೆ,
(ಆಡಳಿತ-2), ವಿಧಾನ ಸೌಧ, ಬೆಂಗಳೂರು.

<u>ಪ್ರತಿಯನ್ನು ಮುಂದಿನ ಕ್ರಮಕ್ಕಾಗಿ :-</u>

1. ಜಿಲ್ಲಾ ನ್ಯಾಯಾಲಯದ ಘಟಕದ ಎಲ್ಲಾ ಅಧೀನ ನ್ಯಾಯಾಲಯಗಳ ಸೂಚನಾ ಫಲಕಕ್ಕೆ.
2. ಅಧ್ಯಕ್ಷರು, ವಕೀಲರ ಸಂಘ, ಮಡಿಕೇರಿ/ವಿರಾಜಪೇಟೆ/ಸೋಮವಾರಪೇಟೆ/ ಪೊನ್ನಂಪೇಟೆ/ ಕುಶಾಲನಗರ – ತಮ್ಮ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ.
3. ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ, ಕೊಡಗು-ಮಡಿಕೇರಿ ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ.
4. ಗಣಕಯಂತ್ರ ವಿಭಾಗ, ಜಿಲ್ಲಾ ನ್ಯಾಯಲಯ, ಮಡಿಕೇರಿ, ಜಿಲ್ಲಾ ನ್ಯಾಯಲಯದ ವೆಬ್ ಸೈಟ್ ನಲ್ಲಿ ಪ್ರಕಟಿಸಲು.
5. ಜಿಲ್ಲಾ ನ್ಯಾಯಾಲಯದ ಸೂಚನಾ ಫಲಕಕ್ಕೆ.
6. ಕಛೇರಿಯ ಕಡತಕ್ಕೆ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಕೊಡಗು-ಮಡಿಕೇರಿ.

# ಅನುಬಂಧ-1

## ಕರ್ನಾಟಕ ಸರ್ಕಾರದ ಕಾನೂನು ಇಲಾಖೆಯಡಿಯಲ್ಲಿ ನವ ಕಾನೂನು ಪದವೀಧರರಿಗೆ ಪ್ರೋತ್ಸಾಹಧನ ನೀಡುವ ಯೋಜನೆಯ ನಮೂನೆ

| | | |
|---|---|---|
| 1) | **ಅರ್ಜಿದಾರರ ಹೆಸರು :** (ಎಸ್.ಎಸ್.ಎಲ್.ಸಿ. ಅಂಕಪಟ್ಟಿಯಲ್ಲಿರುವಂತೆ) | |
| 2) | **ಅರ್ಜಿದಾರರ ತಂದೆ / ಗಂಡನ ಹೆಸರು :** (ಎಸ್.ಎಸ್.ಎಲ್.ಸಿ. ಅಂಕಪಟ್ಟಿಯಲ್ಲಿರುವಂತೆ) | |
| 3) | **ಹುಟ್ಟಿದ ದಿನಾಂಕ :** (ಎಸ್.ಎಸ್.ಎಲ್.ಸಿ. ಅಂಕಪಟ್ಟಿಯಲ್ಲಿರುವಂತೆ) | |
| 4) | **ವಿಳಾಸ ಪ್ರಸ್ತುತ :**<br><br>ಖಾಯಂ ವಿಳಾಸ :<br><br>ಕಛೇರಿ ವಿಳಾಸ: | |
| 5) | **ವಿವಾಹಿತರೇ?** | |
| 6) | **ಭಾರತೀಯ ಪ್ರಜೆಯೇ?** | |
| 7) | **ಧರ್ಮ** | |
| 8) | **ಜಾತಿ & ಪ್ರವರ್ಗ** | |
| 9) | **ಶೈಕ್ಷಣಿಕ ವಿದ್ಯಾರ್ಹತೆಗಳು:** | |

| ಕ್ರ. ಸಂ. | ತೇರ್ಗಡೆಗೊಂಡ ವಿದ್ಯಾರ್ಹತೆ | ವರ್ಷ | ಶೇಕಡಾ ಅಂಕ | ಪ್ರಮಾಣ ಪತ್ರದ ಪ್ರತಿ ಲಗತ್ತಿಸುವುದು |
|---|---|---|---|---|
| 1 | ಎಸ್.ಎಸ್.ಎಲ್.ಸಿ. ($10^{th}$) | | | |
| 2 | ಪಿ.ಯು.ಸಿ. (12 th) | | | |
| 3 | ಪದವಿ | | | |
| 4 | ಕಾನೂನು ಪದವಿ | | | |

| | | | |
|---|---|---|---|
| 10) | ಕರ್ನಾಟಕ ರಾಜ್ಯ ವಕೀಲರ ಪರಿಷತ್ತಿನಲ್ಲಿ ನೋಂದಾಯಿಸಿದ ಸಂಖ್ಯೆ ಮತ್ತು ದಿನಾಂಕ : (ಸಂಬಂಧಿತ ದಾಖಲೆಯ ಪ್ರತಿ) | | |
| 11) | ಪ್ರಸ್ತುತ ವಕೀಲ ವೃತ್ತಿ ನಡೆಸುತ್ತಿದ್ದಲ್ಲಿ ವಿವರ: (ಸಂಬಂಧಿತ ದಾಖಲೆಯ ಪ್ರತಿ) | | |
| 12) | ಇತರೆ ಮಾಹಿತಿ: | | |

ಲಾ-ಎಲ್‌ಎಡಿ/204/2020

ಮೇಲಿನ ನಮೂನೆಯಲ್ಲಿ ನೀಡಲಾಗಿರುವ ಮಾಹಿತಿಯನ್ನು ನಾನು ಪ್ರಜ್ಞಾಪೂರ್ವಕವಾಗಿ ಸತ್ಯವೆಂದು ಅರಿತು ನೀಡಿರುತ್ತೇನೆ. ಒಂದು ವೇಳೆ ಈ ಮಾಹಿತಿಯಲ್ಲಿ ಯಾವುದೇ ಅಂಶಗಳು ಸತ್ಯಾಂಶದಿಂದ ಕೂಡಿಲ್ಲವೆಂದು ತಿಳಿದು ಬಂದಲ್ಲಿ ಆಯ್ಕೆ ಪ್ರಾಧಿಕಾರವು / ಸರ್ಕಾರವು ನಿಯಮಾನುಸಾರ ನನ್ನ ಮೇಲೆ ಅವಶ್ಯಕ ಕಾನೂನು ಕ್ರಮ ಜರುಗಿಸಬಹುದೆಂದು ನಾನು ಒಪ್ಪಿಗೆಯನ್ನು ಈ ಮೂಲಕ ನೀಡಿರುತ್ತೇನೆ.

ಅರ್ಜಿದಾರರ ಸಹಿ

(ಹೆಸರು)